TUMKUR DIST.

160. Ganga Steel Products, 26, 725-00
Polt No. 38/D,
Hirehally Indl. Area,
Tumkur.

MANDYA DIST :

161. M/s. Souryalatha Steel 43,850-00
Industries, 100 Ft. Road,
Mandya -1.

DAKSHINA KANNADA :

162. M/s. Rural Engineering Industries,
Mamachakal Road, Kaptadi,
Udipi, (D.K.)

ಶ್ರೀ ಜಯಚಾಮರಾಜೇಂದ್ರ ಭಾರತೀಯ ವೈದ್ಯಕೀಯ ಸಂಸ್ಥೆಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ.

3722 - ಶ್ರೀ ಪೆರಿಕಲ್ ಎಂ. ಮಲ್ಲಪ್ಪ (ಚಿಕ್ಕಪೇಟೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರಿನ ಶ್ರೀ ಜಯಚಾಮರಾಜೇಂದ್ರ ಭಾರತೀಯ ವೈದ್ಯಕೀಯ ಸಂಸ್ಥೆಯಲ್ಲಿ ಕುಡಿಯುವ ನೀರು ಸರಬರಾಜು ವ್ಯವಸ್ಥೆಯು ಅಸಮರ್ಪಕವಾಗಿದೆಯೆ?

ಆ) ಈ ಸಂಸ್ಥೆಯಲ್ಲಿ ಹೊಸ ನೀರಿನ ಟ್ಯಾಂಕುಗಳ ನಿರ್ಮಾಣ ಅಥವಾ ಸಿನಂಟೆಕ್ಸ್ ಟ್ಯಾಂಕ್‌ಗಳನ್ನು ಏರೀದಿಸಲು ಕ್ರಮ ಕೈಗೊಳ್ಳಲಾಗಿದೆಯೆ?

ಇ) ಇಲ್ಲದಿದ್ದಲ್ಲಿ ಸರ್ಕಾರ ಈ ಬಗ್ಗೆ ತೆಗೆದು ಕೊಂಡಿರುವ ಕ್ರಮವೇನು?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೌದು.

ಆ) ಸಾಕಷ್ಟು ಓವರ್‌ಹೆಡ್ ಟ್ಯಾಂಕುಗಳ ಸೌಲಭ್ಯವಿದೆ. ಆದರೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಾಕಷ್ಟು ನೀರು ಆಸ್ಪತ್ರೆಗೆ ಸರಬರಾಜು ಆಗುತ್ತಿಲ್ಲ.

ಇ) ಮೇಲಿನ (ಆ) ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಚಿಕ್ಕನಾಯಕನಹಳ್ಳಿ ತಾಲ್ಲೂಕು ಹುಳಿಯಾರು ಗ್ರಾಮಕ್ಕೆ ಪ್ರಸೂತಿ ಗೃಹ ಮಂಜೂರು.

3683 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?